ಕರ್ನಾಟಕ ವಿಧಾನ ಸಭೆ

ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ರಾಜ್ಯಪಾಲರು ಮಾಡಿದ ಭಾಷಣದ ಅಧಿಕೃತ ವರದಿ

ಸನ್ಮಾನ್ಯ ರಾಜ್ಯಪಾಲರಾದ ಖುರ್ಷಿದ್ ಆಲಂ ಖಾನ್‌ರವರು ಕರ್ನಾಟಕ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಸಂಯುಕ್ತಾಧಿವೇಶನವನ್ನುದ್ದೇಶಿಸಿ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 11–00 ಗಂಟೆಗೆ ಮಾಡಿದ ಭಾಷಣ.

ಬುಧವಾರ 28ನೇ ಡಿಸೆಂಬರ್ 1994, 7 ಪುಷ್ಯ, ಸಾಯನಸೌರ ಶಕ 1917

ರಾಜ್ಯಪಾಲರು ಬೆಳಿಗ್ಗೆ 11–00 ಗಂಟೆಗೆ ವಿಧಾನಸೌಧದ ಮುಖ್ಯದ್ವಾರದ ಬಳಿ ಇರುವ ದ್ವಾರ ಮಂಟಪಕ್ಕೆ ಆಗಮಿಸಿದರು. ರಾಜ್ಯಪಾಲರು ತಮ್ಮ ಕಾರಿನಿಂದ ಇಳಿದ ಬಳಿಕ ಅವರನ್ನು ಮಾನ್ಯ ಅಧ್ಯಕ್ಷರು, ಮಾನ್ಯ ಸಭಾಪತಿಯವರು ಮತ್ತು ವಿಧಾನ ಮಂಡಲದ ಕಾರ್ಯದರ್ಶಿಯವರು ಸ್ವಾಗತಿಸಿದರು. ನಂತರ ಪೂರ್ವಭಾಗದಲ್ಲಿರುವ ಲಿಫ್ಟ್‌ಗೆ ರಾಜ್ಯಪಾಲರನ್ನು ಕರೆದೊಯ್ಯಲಾಯಿತು. ಮೊದಲನೆಯ ಮಹಡಿಯಲ್ಲಿ ಲಿಫ್ಟ್‌ನಿಂದ ಹೊರಬಂದ ಬಳಿಕ ಈ ಕೆಳಕಂಡ ಕ್ರಮದಲ್ಲಿ ಮೆರವಣಿಗೆಯನ್ನು ರೂಪಿಸಲಾಯಿತು.

ಕಾರ್ಯದರ್ಶಿಯವರು

ಮಾನ್ಯ ಅಧ್ಯಕ್ಷರು ಮಾನ್ಯ ಸಭಾಪತಿಯವರು

ರಾಜ್ಯಪಾಲರು

ಎ.ಡಿ.ಸಿ.

ಈ ರೀತಿಯ ಮೆರವಣಿಗೆಯು ವಿಧಾನಸಭಾ ಸದನದ ಕಡೆಗೆ ಹೊರಟಿತು. ಸಭಾ ಸದನದ ದ್ವಾರದ ಬಳಿ ಮೆರವಣಿಗೆ ಬಂದ ಕೂಡಲೇ ರಾಜ್ಯಪಾಲರ ಆಗಮನವನ್ನು ಮಾರ್ಷಲ್‌ರವರು ಸಭೆಗೆ ತಿಳಿಸಿದರು ಮತ್ತು ರಾಷ್ಟ್ರಗೀತೆಯನ್ನು ನುಡಿಸಲಾಯಿತು. ರಾಜ್ಯಪಾಲರು ಸದನವನ್ನು ಪ್ರವೇಶಿಸಿ ವೇದಿಕೆಯ ಮೇಲೆ ಕುಳಿತುಕೊಳ್ಳುವ ತನಕ ಮಾನ್ಯ ಸದಸ್ಯರುಗಳು ಎದ್ದು ನಿಂತುಕೊಂಡಿದ್ದರು.

ಸಭಾ ಸದನದ ವೇದಿಕೆಯ ಮುಂದೆ ಬಂದ ಬಳಿಕ ಮೆರವಣಿಗೆಯು ಇಬ್ಭಾಗವಾಯಿತು. ವೇದಿಕೆಯ ಮೇಲೆ ಮಾನ್ಯ ಅಧ್ಯಕ್ಷರವರು ರಾಜ್ಯಪಾಲರ ಬಲಭಾಗದಲ್ಲಿ ಮಾನ್ಯ ಸಭಾಪತಿಯವರು ರಾಜ್ಯಪಾಲರ ಎಡಭಾಗದಲ್ಲಿ ಕುಳಿತುಕೊಂಡರು. ರಾಜ್ಯಪಾಲರು ವೇದಿಕೆಯ ಮಧ್ಯಭಾಗದಲ್ಲಿನ ಆಸನದಲ್ಲಿ ಕುಳಿತುಕೊಂಡರು. ಕಾರ್ಯದರ್ಶಿಯವರು ವೇದಿಕೆಯ ಮುಂದುಗಡೆ ಇರುವ ಆಸನದಲ್ಲಿ ಕುಳಿತುಕೊಂಡರು.

ರಾಜ್ಯಪಾಲರ ಭಾಷಣ

ಸನ್ಮಾನ್ಯ ರಾಜ್ಯಪಾಲರು (ಖುರ್ಷಿದ್ ಆಲಂ ಖಾನ್):– ಸನ್ಮಾನ್ಯ ಸಭಾಪತಿಗಳೆ, ಸನ್ಮಾನ್ಯ ಅಧ್ಯಕ್ಷರೆ ಮತ್ತು ಮಾನ್ಯ ಸದಸ್ಯರುಗಳೆ, ತಮಗೆಲ್ಲರಿಗೂ ಹಾರ್ದಿಕ ಸ್ವಾಗತ. It gives me great pleasure to welcome all of you to this Joint Session of the Karnataka Legislature in the wake of the recent General Elections held for the Karnataka Legislative Assembly.